# ಕರ್ನಾಟಕ ವಿಧಾನ ಪರಿಷತ್ತು

**21ನೇ ಡಿಸೆಂಬರ್ 2018**
**ಶುಕ್ರವಾರ**

<u>ವಿಷಯಾನುಕ್ರಮಣಿಕೆ</u>


1. ಪ್ರಶ್ನೋತ್ತರಗಳು
   ಅ) ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದ ಮುಂದೆ ಮಂಡಿಸಲಾದ ಉತ್ತರಗಳು
   ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

2. ಸಚಿವರ ಹೇಳಿಕೆಗಳು
   ಅ) ನಿಯಮ 72ರಡಿಯಲ್ಲಿನ 43 ಸೂಚನೆಗಳಿಗೆ ಹಾಗೂ
   ಆ) ನಿಯಮ 330ರಡಿಯಲ್ಲಿನ 19 ಸೂಚನೆಗಳಿಗೆ
   ಡಾ:ಜಯಮಾಲ (ಸಭಾ ನಾಯಕರು) ರವರಿಂದ ಉತ್ತರಗಳ ಮಂಡನೆ

3. ಸಭಾಪತಿಯವರ ಅನುಮತಿಯ ಮೇರೆಗೆ ಪ್ರಸ್ತಾಪಿಸಲ್ಪಟ್ಟ ವಿಷಯಗಳಿಗೆ ಸಂಬಂಧಿಸಿದಂತೆ ಸಚಿವರ ಹೇಳಿಕೆ
   ಅ) ದಿನಾಂಕ 18-12-2018ರಂದು ಶ್ರೀ ಶ್ರೀನಿವಾಸ್ ವಿ.ಮಾನೆಯವರು ಹಾನಗಲ್ ತಾಲ್ಲೂಕಿನ ರೈತರಿಗೆ ಬ್ಯಾಂಕ್ ಮೂಲಕ ವಿಮೆ ವಿತರಣೆಯಲ್ಲಿ ತಾರತಮ್ಯವಾಗಿರುವ ಬಗ್ಗೆ ಪ್ರಸ್ತಾಪಿಸಿದ ವಿಷಯ
   – ಡಾ:ಜಯಮಾಲ (ಸಭಾ ನಾಯಕರು)

   ಆ) ದಿನಾಂಕ 18-12-2018ರಂದು ಶ್ರೀ ಎಂ.ಕೆ.ಪ್ರಾಣೇಶ್‌ರವರು ಚಿಕ್ಕಮಗಳೂರು ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ಮತ್ತು ಕೃಷಿ ಉದ್ದೇಶಕ್ಕಾಗಿ ಬಳಸುವ ನೀರಿಗೆ ನೀಡುವ ನೀರಿನ ಹಕ್ಕುಪತ್ರ ದೃಢೀಕರಣದಲ್ಲಿ ಉಂಟಾಗಿರುವ ಗೊಂದಲದ ಬಗ್ಗೆ ಪ್ರಸ್ತಾಪಿಸಿದ ವಿಷಯ
   – ಡಾ:ಜಯಮಾಲ (ಸಭಾ ನಾಯಕರು)

4. ಚುನಾವಣಾ ಪ್ರಸ್ತಾವ
   ಅ) ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಇಬ್ಬರು ವಿಧಾನ ಪರಿಷತ್ತಿನ ಸದಸ್ಯರನ್ನು ಹಾಗೂ
   ಆ) ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬ ವಿಧಾನ ಪರಿಷತ್ತಿನ ಸದಸ್ಯರನ್ನು ಚುನಾಯಿಸುವ ಬದಲು ನಾಮ ನಿರ್ದೇಶಿಸುವ ಬಗ್ಗೆ
   (ಪ್ರಸ್ತಾವವನ್ನು ಅಂಗೀಕರಿಸಲಾಯಿತು)


“ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು”

5. ನಿಯಮ 58ರಡಿಯಲ್ಲಿ ಅರ್ಧ ಗಂಟೆ ಕಾಲಾವಧಿ ಚರ್ಚೆ
   – ಡಾ:ಜಯಮಾಲ (ಸಭಾ ನಾಯಕರು) ರವರಿಂದ
     4 ಸೂಚನೆಗಳಿಗೆ ಸದನದಲ್ಲಿ ಉತ್ತರಗಳ ಮಂಡನೆ

6. ಪ್ರಕಟಣೆ

7. ಕಾರ್ಯದರ್ಶಿಯವರ ವರದಿ

8. ಶಾಸನ ರಚನೆ

   ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ

   ಅ) ಕರ್ನಾಟಕ ವಿಧಾನ ಮಂಡಲ (ಅನರ್ಹತಾ) (ತಿದ್ದುಪಡಿ) ವಿಧೇಯಕ, 2018
   – ಶ್ರೀ ಕೃಷ್ಣ ಭೈರೇಗೌಡ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹರಗಳ ಸಚಿವರು)

   (ವಿಧೇಯಕ ಅಂಗೀಕರಿಸಲ್ಪಟ್ಟಿತು)

   ಆ) ಕರ್ನಾಟಕ ಸಿವಿಲ್ ಸೇವೆಗಳ (ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ) ವಿಧೇಯಕ, 2018
   – ಶ್ರೀ ಹೆಚ್.ಡಿ.ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು)

   (ವಿಧೇಯಕ ಅಂಗೀಕರಿಸಲ್ಪಟ್ಟಿತು)

9. ಸಾರಾಂಶ

*******

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

(606)21.12.2018,11.30,ಟಿಸಿಹೆಚ್-ಎಂಡಿ

(ಸಭಾಪತಿಯವರ ಉಪಸ್ಥಿತಿ)

**ಕರ್ನಾಟಕ ವಿಧಾನ ಪರಿಷತ್ತು**

**ಶುಕ್ರವಾರ, 21ನೇ ಡಿಸೆಂಬರ್ 2018**

**ಸದನವು ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ**

**ಬೆಳಿಗ್ಗೆ 11 ಗಂಟೆ 30 ನಿಮಿಷಕ್ಕೆ ಸಮಾವೇಶಗೊಂಡಿತು**

**ಸಭಾಪತಿ (ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ) ಯವರು**

**ಪೀಠದಲ್ಲಿ ಉಪಸ್ಥಿತರಿದ್ದರು.**

* * * *

**(ಸದನ ಪ್ರಾರಂಭವಾಗುತ್ತಿದ್ದಂತೆ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ ಸದನದ ಭಾವಿಯಲ್ಲಿ ಧರಣಿ ನಿರತರಾಗಿದ್ದ ಬಿ.ಜೆ.ಪಿಯ ಸದಸ್ಯರುಗಳು 'ರೈತ ವಿರೋಧಿ ಸರ್ಕಾರಕ್ಕೆ ಧಿಕ್ಕಾರ' ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರು:-** ಈಗ ಪ್ರಶ್ನೋತ್ತರ ಅವಧಿ ಪ್ರಾರಂಭ ಮಾಡೋಣ.

**ಡಾ॥ ಜಯಮಾಲ (ಸಭಾ ನಾಯಕರು):-** ಮಾನ್ಯ ಸಭಾಪತಿಯವರೆ, 10ನೇ ತಾರೀಖಿನಿಂದ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ಪ್ರಾರಂಭವಾಗಿದೆ.

**ಶ್ರೀ ಬಂಡೆಪ್ಪ ಖಾಶೆಂಪೂರ (ಸಹಕಾರ ಸಚಿವರು):-** ಮಾನ್ಯ ಸಭಾಪತಿಯವರೆ, ಸದನ order ನಲ್ಲಿ ಇಲ್ಲ.

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ವಿರೋಧ ಪಕ್ಷದ ನಾಯಕರು) (ತಮ್ಮ ಸ್ಥಾನದಿಂದ):-** ಮಾನ್ಯ ಸಭಾಪತಿಯವರೆ, ದಯವಿಟ್ಟು ನಮ್ಮ ಆಗ್ರಹ ಇರುವುದೇನೆಂದರೆ, ಉತ್ತರ ಕರ್ನಾಟಕದ ಸಮಸ್ಯೆಗಳನ್ನು ಕೈಗೆತ್ತಿಕೊಳ್ಳಬೇಕೆಂಬುದು ನಮ್ಮ ವಿನಂತಿ. ಡಾ॥ ನಂಜುಂಡಪ್ಪ ವರದಿ, ರೈತರ ಸಮಸ್ಯೆಗಳು, ಸಾಲ ಮನ್ನಾದ ಸಮಸ್ಯೆಗಳು, ನೀರಾವರಿಯ ಸಮಸ್ಯೆಗಳ ಬಗ್ಗೆ ಚರ್ಚೆ ಕೈಗೊಳ್ಳುವುದಕ್ಕೆ ಅನುಮತಿ ಕೊಡಬೇಕೆಂದು ತಮ್ಮಲ್ಲಿ ಕೋರುತ್ತೇನೆ.

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿರೋಧ ಪಕ್ಷದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೆ, ಉತ್ತರ ಕರ್ನಾಟಕದ ಸಮಸ್ಯೆಗಳ ಬಗ್ಗೆ ಚರ್ಚೆಯನ್ನು ಕೈಗೆತ್ತಿಕೊಳ್ಳಲು ಅನುಮತಿ ಕೊಡಬೇಕು.

**ಶ್ರೀ ಪಿ.ಆರ್.ರಮೇಶ್:-** ಮಾನ್ಯ ಸಭಾಪತಿಯವರೆ, ನನ್ನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 1310 ನ್ನು ಸರ್ಕಾರಕ್ಕೆ ಕೇಳಬಯಸುತ್ತೇನೆ.

(ಗೊಂದಲ)

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**(ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಸದಸ್ಯರು 'ಉತ್ತರ ಕರ್ನಾಟಕದ ಯೋಜನೆಗಳಿಗೆ ಸ್ಪಂದಿಸದ ಸರ್ಕಾರಕ್ಕೆ ಧಿಕ್ಕಾರ, ಧಿಕ್ಕಾರ', 'ಉತ್ತರ ಕರ್ನಾಟಕ ವಿರೋಧಿ ಸರ್ಕಾರಕ್ಕೆ ಧಿಕ್ಕಾರ, ಧಿಕ್ಕಾರ' ಎನ್ನುವ ಘೋಷಣೆಗಳನ್ನು ಕೂಗುತ್ತಿದ್ದರು)**

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೆ, ದಯಮಾಡಿ ಅವರಿಗೆ ಸದನದ ನಿಯಮಗಳನ್ನು ಕಲಿಸಿಕೊಡಿ.

**(ಗೊಂದಲ)**

**ಸಭಾಪತಿಯವರು:-** ಈಗ ಸದನವನ್ನು ಮಧ್ಯಾಹ್ನ 12 ಗಂಟೆಯವರೆಗೆ ಮುಂದೂಡುತ್ತಿದ್ದೇನೆ.

**(ಸದನವು ಬೆಳಿಗ್ಗೆ 11 ಗಂಟೆ 32 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ ಮಧ್ಯಾಹ್ನ 12.00 ಗಂಟೆಗೆ ಸೇರಲು ನಿಶ್ಚಯಿಸಿತು.)**

(607) 21-12-2018 12.10 ಸಿಎಸ್/ಆರ್ಎನ್

**(ಸದನವು ಮಧ್ಯಾಹ್ನ 12 ಗಂಟೆ 10 ನಿಮಿಷಕ್ಕೆ ಸಮಾವೇಶಗೊಂಡಿತು. ಮಾನ್ಯ ಸಭಾಪತಿಯವರು ಪೀಠವನ್ನು ಅಲಂಕರಿಸಿದರು.)**

**(ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ವಿರೋಧ ಪಕ್ಷದ ಸದಸ್ಯರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು.)**

**1. ಪ್ರಶ್ನೋತ್ತರಗಳು**

**ಅ)ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದ ಮುಂದೆ ಮಂಡಿಸಲಾದ ಉತ್ತರಗಳು**

**ಡಾ॥ಜಯಮಾಲ(ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ದಿನಾಂಕ, 20ನೇ ಡಿಸೆಂಬರ್ 2018ರ, ಸಮೂಹ-4ರ ಚುಕ್ಕೆ ಗುರುತಿನ 15 ಪ್ರಶ್ನೆಗಳ ಪೈಕಿ 14 ಪ್ರಶ್ನೆಗಳಿಗೆ ಹಾಗೂ ದಿನಾಂಕ 21 ನೇ ಡಿಸೆಂಬರ್ 2018ರ, ಸಮೂಹ-5ರ ಚುಕ್ಕೆ ಗುರುತಿನ 15 ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:-**ಮಂಡಿಸಲಾಯಿತು.

**ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು**

**ಡಾ॥ ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ದಿನಾಂಕ, 20ನೇ ಡಿಸೆಂಬರ್ 2018ರ, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಸಮೂಹ 4ರಲ್ಲಿನ 9ನೇ ಪಟ್ಟಿಯ 127 ಪ್ರಶ್ನೆಗಳ ಪೈಕಿ 73 ಪ್ರಶ್ನೆಗಳಿಗೆ, ಹಾಗೂ ದಿನಾಂಕ, 21ನೇ ಡಿಸೆಂಬರ್ 2018ರ, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ ಸಮೂಹ 4ರಲ್ಲಿನ 10ನೇ ಪಟ್ಟಿಯ 115 ಪ್ರಶ್ನೆಗಳ ಪೈಕಿ 93 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:-**ಮಂಡಿಸಲಾಯಿತು.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**2. ಸಚಿವರ ಹೇಳಿಕೆಗಳು**

**ಡಾ॥ ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ನಿಯಮ 72ರಡಿಯಲ್ಲಿನ 43 ಸೂಚನೆಗಳಿಗೆ ಮತ್ತು ನಿಯಮ 330 ರಡಿಯಲ್ಲಿನ 19 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:-**ಮಂಡಿಸಲಾಯಿತು

**3. ಸಭಾಪತಿಯವರ ಅನುಮತಿಯ ಮೇರೆಗೆ ಪ್ರಸ್ತಾಪಿಸ್ಪಟ್ಟ ವಿಷಯಗಳಿಗೆ ಸಂಬಂಧಿಸಿದಂತೆ ಸಚಿವರ ಹೇಳಿಕೆ**

**ಡಾ॥ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಗಳೇ, ಮಾನ್ಯ ಸದಸ್ಯರುಗಳಾದ ಶ್ರೀ ಶ್ರೀನಿವಾಸ ವಿ.ಮಾನೆಯವರು ಹಾನಗಲ್ ತಾಲ್ಲೂಕಿನ ರೈತರಿಗೆ ಬ್ಯಾಂಕ್ ಮೂಲಕ ವಿಮೆ ವಿತರಣೆಯಲ್ಲಿ ತಾರತಮ್ಯವಾಗಿರುವ ಬಗ್ಗೆ ಹಾಗೂ ಶ್ರೀ ಎಂ.ಕೆ.ಪ್ರಾಣೇಶ್‌ರವರು ದಿನಾಂಕ 18-12-2018ರಂದು ಚಿಕ್ಕಮಗಳೂರು ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ಮತ್ತು ಕೃಷಿ ಉದ್ದೇಶಕ್ಕಾಗಿ ಬಳಸುವ ನೀರಿಗೆ ನೀಡುವ ನೀರಿನ ಹಕ್ಕುಪತ್ರ ದೃಢೀಕರಣದಲ್ಲಿ ಉಂಟಾಗಿರುವ ಗೊಂದಲದ ಬಗ್ಗೆ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ಸೂಚನೆಗೆ ಸಂಬಂಧಿಸಿದ ಉತ್ತರವನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

(ಹೇಳಿಕೆಗಳ ಪ್ರತಿಯನ್ನು ಲಗತ್ತಿಸಲಾಗಿದೆ)

**4. ಚುನಾವಣಾ ಪ್ರಸ್ತಾವ**

**ಡಾ॥ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಗಳೇ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಇಬ್ಬರು ಸದಸ್ಯರನ್ನು ಹಾಗೂ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬ ವಿಧಾನ ಪರಿಷತ್ತಿನ ಸದಸ್ಯರನ್ನು ಚುನಾಯಿಸುವ ಬಗ್ಗೆ ದಿನಾಂಕ 13-12-2018ರಂದು ಮಂಡಿಸಿರುವ ಚುನಾವಣಾ ಪಸ್ತಾವದ ಹಿನ್ನೆಲೆಯಲ್ಲಿ ಸದರಿ ವಿಶ್ವವಿದ್ಯಾನಿಲಯಗಳಿಗೆ ವಿಧಾನ ಪರಿಷತ್ತಿನ ಸದಸ್ಯರನ್ನು ಚುನಾಯಿಸುವ ಬದಲು ನಾಮ ನಿರ್ದೇಶಿಸಲು ಈ ಸದನ ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡಬೇಕೆಂದು ಕೋರುತ್ತೇನೆ.

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

**ಸಭಾಪತಿಯವರು:- “**ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಇಬ್ಬರು ಸದಸ್ಯರನ್ನು ಹಾಗೂ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬ ವಿಧಾನ ಪರಿಷತ್ತಿನ ಸದಸ್ಯರನ್ನು ಚುನಾಯಿಸುವ ಬದಲು ನಾಮ ನಿರ್ದೇಶಿಸಲು ಸದನದ ಅನುಮತಿ ಇದೆ ಎಂದು ಭಾವಿಸುತ್ತೇನೆ.

**(ಪ್ರಸ್ತಾವವನ್ನು ಅಂಗೀಕರಿಸಲಾಯಿತು)**

## 5. ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆ

**ಡಾ॥ಜಯಮಾಲ (ಸಭಾನಾಯಕರು):-** ಮಾನ್ಯ ಸಭಾಪತಿಗಳೇ, ನಿಯಮ 58ರಡಿಯಲ್ಲಿ ಅರ್ಧ ಗಂಟೆ ಕಾಲಾವಧಿ ಚರ್ಚೆಗಾಗಿ 05 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 04 ಸೂಚನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

(ಹೇಳಿಕೆಗಳ ಪ್ರತಿಯನ್ನು ಲಗತ್ತಿಸಲಾಗಿದೆ)

## 6. ಪ್ರಕಟಣೆ

**ಸಭಾಪತಿಯವರು:-** ಮಾನ್ಯ ಸಭಾಧ್ಯಕ್ಷರಿಂದ ಈ ಮುಂದಿನ ಸಂದೇಶ ಬಂದಿರುತ್ತದೆ:-

ಅ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 113(1) ಮೇರೆಗೆ ವಿಧಾನ ಸಭೆಯು ದಿನಾಂಕ 21-12-2018ರಂದು ಕರ್ನಾಟಕ ವಿಧಾನ ಸಭೆಯಿಂದ ಅಂಗೀಕಾರವಾದ ರೂಪದಲ್ಲಿ ಮತ್ತು ಕರ್ನಾಟಕ ವಿಧಾನ ಪರಿಷತ್ತಿನಿಂದ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ರೂಪದಲ್ಲಿರುವ 2018ನೇ ಸಾಲಿನ”ರೈ ತಾಂತ್ರಿಕ ವಿಶ್ವವಿದ್ಯಾನಿಲಯ, ಬೆಂಗಳೂರು(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸತೆಂದು ಸದನದ ಗಮನಕ್ಕೆ ತರಲಾಗಿದೆ.

ಆ) ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 104ರ ಮೇರೆಗೆ ವಿಧಾನ ಸಭೆಯು ದಿನಾಂಕ 21-12-2018ರಂದು ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿತೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ)ವಿಧೇಯಕ, 2018
2. _ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕ, 2018

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”

**7. ಕಾರ್ಯದರ್ಶಿಯವರ ವರದಿ**

**ಕಾರ್ಯದರ್ಶಿ(ಕವಿಪ):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

1. ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ)ವಿಧೇಯಕ, 2018
2. ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕ, 2018

**ಸಭಾಪತಿಯವರು:** ಮಂಡಿಸಲಾಯಿತು.

**8. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಅ) ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ)ವಿಧೇಯಕ, 2018**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018 ರ ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು.**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"2018ರ ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು.**

**ಖಂಡ 2**

**ಸಭಾಪತಿಯವರು:-** "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ಅನ್ನು ವಿಧೇಯಕಕ್ಕೆ ಸೇರಿಸಲಾಯಿತು)

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ಖಂಡ 1 ಇತ್ಯಾದಿ**

ಸಭಾಪತಿಯವರು:- ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ಪೀಠಿಕೆ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ಪೀಠಿಕೆ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾವದ ಅಂಗೀಕಾರ

**ಶ್ರೀ ಕೃಷ್ಣ ಭೈರೇಗೌಡ(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018 ರ ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018 ರ ಕರ್ನಾಟಕ ವಿಧಾನ ಮಂಡಲ(ಅನರ್ಹತಾ)(ತಿದ್ದುಪಡಿ) ವಿಧೇಯಕವು ಅಂಗೀಕರಿಸಲ್ಪಟ್ಟಿತು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

**ಆ) ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕ, 2018**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಹೆಚ್.ಡಿ.ಕುಮಾರಸ್ವಾಮಿ(ಮಾನ್ಯ ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ "2018ರ ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"2018ರ ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು.**

**ಖಂಡ 2**

**ಸಭಾಪತಿಯವರು:-** "ಖಂಡ 2 ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ಅನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

ಸಭಾಪತಿಯವರು:- ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ಪೀಠಿಕೆ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

(ಮೊದಲನೆಯ ಖಂಡ, ಪೀಠಿಕೆ, ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು.)

**ಪ್ರಸ್ತಾವದ ಅಂಗೀಕಾರ**

**ಶ್ರೀ ಹೆಚ್.ಡಿ.ಕುಮಾರಸ್ವಾಮಿ(ಮಾನ್ಯ ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ "2018ರ ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕ"ವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ "2018ರ ಕರ್ನಾಟಕ ಸಿವಿಲ್ ಸೇವೆಗಳ(ನೇಮಕಾತಿಯ ಸಮಯದಲ್ಲಿ ಅಭ್ಯರ್ಥಿಗಳ ಆಯ್ಕೆಯ ಕಾರ್ಯವಿಧಾನ)ವಿಧೇಯಕವು ಅಂಗೀಕರಿಸಲ್ಪಟ್ಟಿತು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.**

" ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು "

(608) 21–12–2018 12–20 ಎಲ್‌ಎಂ/ವಿಕೆ

**9. ಸಾರಾಂಶ**

**(ಸಾರಾಂಶದ ಪ್ರತಿಯನ್ನು ಲಗತ್ತಿಸಲಾಗಿದೆ)**

**ಸಭಾಪತಿಯವರು:–** ಈಗ ಸದನವನ್ನು ಅನಿರ್ಧಿಷ್ಟ ಕಾಲದವರೆಗೆ ಮುಂದೂಡಲಾಗುತ್ತಿದೆ.

**(ಮಧ್ಯಾಹ್ನ 12 ಗಂಟೆ 25 ನಿಮಿಷಕ್ಕೆ ರಾಷ್ಟ್ರಗೀತೆಯೊಂದಿಗೆ ಸದನವು ಅನಿರ್ಧಿಷ್ಟ ಕಾಲದವರೆಗೆ ಮುಂದೂಡಲ್ಪಟ್ಟಿತು)**

*******

“ ತಿದ್ದುಪಡಿಯಾಗದ ಪ್ರತಿ, ನ್ಯಾಯಾಲಯಗಳಲ್ಲಿ ಅಥವಾ ಪತ್ರಿಕಾ ಪ್ರಕಟಣೆಗಾಗಿ ಉಪಯೋಗಿಸಕೂಡದು ”